ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADM10/EST 9/13/2022

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ: 19-08-2022

## ಸುತ್ತೋಲೆ

ವಿಷಯ: ಬಯೋಮೆಟ್ರಿಕ್ ಯಂತ್ರದಲ್ಲಿ ಕಡ್ಡಾಯವಾಗಿ ಹಾಜರಾತಿಯನ್ನು ದಾಖಲಿಸುವಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಡಿಟಿಇ/03/ಎಸ್‌ಪಿಎಸ್ (1) 2015 ದಿ: 17-04-2015
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಡಿಟಿಇ/64/ಇಎಸ್‌ಟಿ (7) 2013 ದಿ: 08-08-2016
3. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಡಿಟಿಇ/01/ಎಂಎಸ್‌ಸಿ(2)2020 ದಿ: 18-12-2020
4. ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಸುತ್ತೋಲೆ ಸಂ:DTE ADM10/ EST 9/13/2022 ದಿ: 24-02-2022
5. ಸರ್ಕಾರದ ಸುತ್ತೋಲೆ ಸಂ: ಮುಕಾ/4464335/2022 ದಿ; 25-07-2022

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸಿ ಮಾಸಿಕ ವೇತನ ಸೆಳೆಯಲು ಉಲ್ಲೇಖ (01 ರಿಂದ 04)ರ ಸುತ್ತೋಲೆಯಲ್ಲಿ ಪ್ರಾಂಶುಪಾಲರು/ವೇತನ ಬಟವಾಡೆ ಅಧಿಕಾರಿಗಳಿಗೆ ಸೂಚಿಸಲಾಗಿತ್ತು. ಆದರೆ, ಕೆಲವು ಸಂಸ್ಥೆಯ ಪ್ರಾಂಶುಪಾಲರು ಬಯೋಮೆಟ್ರಿಕ್ ಯಂತ್ರವು ದುರಸ್ತಿಯಲ್ಲಿರುವುದಾಗಿ, ಬಯೋಮೆಟ್ರಿಕ್ ಹಾಜರಾತಿಯನ್ನು ಪಡೆಯಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ. ಈ ಬಗ್ಗೆ ಸಂಬಂಧಪಟ್ಟ ಪ್ರಾಂಶುಪಾಲರು ತಮ್ಮ ಹಂತದಲ್ಲಿ ದುರಸ್ತಿ ಕ್ರಮ ಕೈಗೊಂಡು ದಿನಾಂಕ 22.08.2022 ರಿಂದ ಕಡ್ಡಾಯವಾಗಿ ಬಯೋಮೆಟ್ರಿಕ್ ಹಾಜರಾತಿ ಪಡೆಯಲು ಸೂಚಿಸಿದೆ.

ಪ್ರಸ್ತುತ ಉಲ್ಲೇಖ (05)ರ ಸರ್ಕಾರದ ಸುತ್ತೋಲೆಯನ್ವಯ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ನಿಗಧಿತ ಸಮಯಕ್ಕೆ ಹಾಜರಾಗಿ ಕಛೇರಿ ಅವಧಿಗೆ ಪೂರ್ಣವಾಗುವವರೆಗೆ ತಮಗೆ ನಿಗದಿಪಡಿಸಿದ ಸ್ಥಾನದಲ್ಲಿ ಇದ್ದು ಕರ್ತವ್ಯ ನಿರ್ವಹಿಸುವಂತೆ ಹಾಗೂ ಅನ್ಯ ಕರ್ತವ್ಯದ ಮೇರೆಗೆ ತೆರಳಬೇಕಾಗಿದ್ದಲ್ಲಿ, ಚಲನ-ವಲನ ವಹಿಯಲ್ಲಿ ಸಕಾರಣವನ್ನು ನಮೂದಿಸಿ, ಮೇಲಾಧಿಕಾರಿಗಳ ಪೂರ್ವಾನುಮತಿಯನ್ನು ಪಡೆಯತಕ್ಕದ್ದು, ಇಲ್ಲವಾದಲ್ಲಿ ಮೇಲಾಧಿಕಾರಿಗಳ ಅನುಮತಿ ಪಡೆದಿಲ್ಲದ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಸಕ್ಷಮ ಪ್ರಾಧಿಕಾರವು ಸೂಕ್ತ ಶಿಸ್ತು ಕ್ರಮ ಜರುಗಿಸುವಂತೆ ಸೂಚಿಸಲಾಗಿದೆ

..2

ಮುಂದುವರೆದು: ಪ್ರತಿ ಮಾಹೆಯ ಅಂತ್ಯದಲ್ಲಿ ವೇತನ ಬಿಲ್ಲು ತಯಾರಿಸುವ ಪೂರ್ವದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು/ವೇತನ ಬಟವಾಡೆ ಅಧಿಕಾರಿಗಳು ಕಡ್ಡಾಯವಾಗಿ ಬಯೋಮೆಟ್ರಿಕ್ ಯಂತ್ರದಲ್ಲಿ ದಾಖಲಾಗುವ ಹಾಜರಾತಿಯನ್ನು ನಿಯಮಾನುಸಾರ ಪರಿಶೀಲಿಸಿ, ಕ್ರಮ ಕೈಗೊಂಡ ನಂತರ ವೇತನದ ಬಿಲ್ಲುಗಳನ್ನು ಸಹಿ ಮಾಡುವುದು ಹಾಗೂ ಹಾಜರಾತಿ ವಿವರವನ್ನು ದೃಢೀಕರಿಸಿ ಪ್ರತಿ ಮಾಹೆಯ 05 ನೇ ತಾರೀಖಿನೊಳಗೆ ಕಡ್ಡಾಯವಾಗಿ ಆಯುಕ್ತಾಲಯಕ್ಕೆ ಸಲ್ಲಿಸುವುದು ಹಾಗೂ 07 ದಿನಗಳು ಅಥವಾ ಅದಕ್ಕಿಂತ ಹೆಚ್ಚು ಅನಧಿಕೃತ ಗೈರು ಹಾಜರಾದವರ ವಿರುದ್ಧ ಕೈಗೊಂಡ ಕ್ರಮದ ಮಾಹಿತಿಯನ್ನು ಸಹ ಕಡ್ಡಾಯವಾಗಿ ಈ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ. ಮತ್ತು ಇಲಾಖಾ ತಪಾಸಣಾ ತಂಡ ಸಂಬಂಧಪಟ್ಟ ಸಂಸ್ಥೆಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಸದರಿ ಮಾಹಿತಿಯನ್ನು ಹಾಜರುಪಡಿಸುವಂತೆ ತಿಳಿಸುತ್ತಾ, ಈ ಮೇಲಿನ ಸೂಚನೆಗಳನ್ನು ಪಾಲಿಸದಿದ್ದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು/ವೇತನ ಬಟವಾಡೆ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸಿ, ನಿಯಮಾನುಸಾರ ಕ್ರಮ ಜರುಗಿಸಲಾಗುವುದು.

"ಟಿಪ್ಪಣಿ ಮಾನ್ಯ ಆಯುಕ್ತರವರಿಂದ ಅನುಮೋದಿಸಲ್ಪಟ್ಟಿದೆ"

19/8/22

ಜಂಟಿ ನಿರ್ದೇಶಕರು (ಆಡಳಿತ)

ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳು/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ
2. 'ಇ'-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು-560 001 (ಇಲಾಖಾ WEBSITE ನಲ್ಲಿ ಪ್ರಚುರುಪಡಿಸಲು)

ಪ್ರತಿ:

1. ಆಯುಕ್ತರವರ ಆಪ್ತ ಶಾಖೆಗೆ
2. ನಿರ್ದೇಶಕರವರ ಆಪ್ತ ಶಾಖೆಗೆ